ಆಸ್ಪತ್ರೆಗಳಲ್ಲಿ ಔಷಧ ತಜ್ಞರ ಹುದ್ದೆ ಖಾಲಿ ಇರುವುದು:

763 (399); ಶ್ರೀ ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

(ಅ) ಚಿಂಚೋಳಿ ತಾಲ್ಲೂಕು ಆಸ್ಪತ್ರೆಯಲ್ಲಿರುವ ಔಷಧ ತಜ್ಞರ ಹುದ್ದೆಯು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಹುದ್ದೆಯು ಎಷ್ಟು ವರ್ಷದಿಂದ ಖಾಲಿಯಿರುತ್ತದೆ; ಹಾಗೂ ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಬಂದಿದೆ. ದಿನಾಂಕ: 2007–08ನೇ ಸಾಲಿನಿಂದ ಖಾಲಿ ಇವೆ. ಭಾರತ ಸಂವಿಧಾನ ಅನುಚ್ಛೇದ 371ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಂದ ಕುರಿತಂತೆ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧ ಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಮಗಳನ್ವಯ ವರ್ಗೀಕರಿಸಿ, ತದ ನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಅಂಬುಲೆನ್ಸ್ ವಾಹನಗಳು:

764 (1455); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

(ಅ) ರಾಜ್ಯದಲ್ಲಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಅನುಕೂಲವಾಗಲೆಂದು ಬಳಸುತ್ತಿರುವ ಅಂಬುಲೆನ್ಸ್ ವಾಹನಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಅಂಬುಲೆನ್ಸ್ ವಾಹನಗಳಿಗೆ ಚಾಲಕರನ್ನು ಯಾವ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುತ್ತದೆ; (ವಿವರ ನೀಡುವುದು)

(ಇ) ರೋಗಿಗಳನ್ನು ಅಂಬುಲೆನ್ಸ್ ವಾಹನದಲ್ಲಿ ಕರೆದೊಯ್ಯುವಾಗ ಹಾಗೂ ಇನ್ನಿತರೆ ಕರ್ತವ್ಯದ ಸಂದರ್ಭಗಳಲ್ಲಿ ಅಂಬುಲೆನ್ಸ್ ವಾಹನದ ಚಾಲಕರು ಮತ್ತು ಸಿಬ್ಬಂದಿಗಳು ಅಪಘಾತಕ್ಕೆ ಈಡಾಗಿ ಸಾವನ್ನಪ್ಪುತ್ತಿದ್ದು, ಈ ರೀತಿ ಅಪಘಾತವಾಗುವ ಸಿಬ್ಬಂದಿಗಳಿಗೆ ಪರಿಹಾರ ನೀಡಲಾಗುವುದೇ? (ವಿವರ ನೀಡುವುದು)

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ರಾಜ್ಯದಲ್ಲಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಅನುಕೂಲವಾಗ ಲೆಂದು ಬಳಸುತ್ತಿರುವ ಅಂಬುಲೆನ್ಸ್ ವಾಹನಗಳ ಸಂಖ್ಯೆ: 607, ಪ್ರಾಥಮಿಕ ಆರೋಗ್ಯ ಕೇಂದ್ರದ ಹಂತದಲ್ಲಿ – 155, ಸಮುದಾಯ ಆರೋಗ್ಯ ಕೇಂದ್ರದ ಹಂತದಲ್ಲಿ – 143, ಸಾರ್ವಜನಿಕ ಆಸ್ಪತ್ರೆ ಹಾಗೂ ಜಿಲ್ಲಾ ಆಸ್ಪತ್ರೆಗಳ ಹಂತದಲ್ಲಿ 309, ಅಂಬುಲೆನ್ಸ್ ವಾಹನಗಳನ್ನು ಬಳಸಲಾಗುತ್ತಿದೆ.

(ಆ) ಅಂಬುಲೆನ್ಸ್ ವಾಹನಗಳು ಸಾರಿಗೆ ವಾಹನ ಆಗಿರುವುದರಿಂದ ಕಡ್ಡಾಯ ವಾಗಿ ಚಾಲ್ತಿಯಲ್ಲಿರುವ ಚಾಲನಾ ಪರವಾನಗಿಯೊಂದಿಗೆ ಬ್ಯಾಡ್ಜ್ ಹೊಂದಿರುವ ಚಾಲಕರನ್ನು ನೇಮಿಸಲಾಗುತ್ತದೆ. ವಾಹನ ಚಾಲಕರಿಗೆ ಎರಡು ವರ್ಷಗಳಿಗೆ ಕಡಿಮೆ ಇಲ್ಲದ ಚಾಲನಾ ಅನುಭವವಿರಬೇಕು. 40 ವರ್ಷದ ಒಳಗಿನವರಾಗಿರಬೇಕು.

ಖಾಯಂ ವಾಹನ ಚಾಲಕರು ಇರದ ಅಂಬ್ಯುಲೆನ್ಸ್‌ಗಳಿಗೆ ಹೊರ ಸಂಪನ್ಮೂಲದಿಂದ ಚಾಲಕರ ಸೇವೆ ಪಡೆಯಲಾಗುತ್ತಿದೆ.

(ಇ) ಇಲ್ಲ.